All India Radio: Bangalore
National Bulletin In Kannada
10.06.2026 7.35 am
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<>><><*><><<>

ಮುಖ್ಯಾಂಶಗಳು

೧. ಎನ್‌ಡಿಎ ಸರ್ಕಾರದ ೧೨ ವರ್ಷಗಳ ಪೂರೈಕೆ; ಇಂದು ನವದೆಹಲಿಯಲ್ಲಿ ಮೈತ್ರಿಕೂಟದ ನಾಯಕರ ಸಭೆ

೨. ಭಾರತದ ಅತ್ಯಂತ ದೀರ್ಘಾವಧಿಯ ಚುನಾಯಿತ ಪ್ರಧಾನಿ ಎಂಬ ಹೆಗ್ಗಳಿಕೆಗೆ ಪಾತ್ರರಾದ ಹಿನ್ನಲೆ, ಜಾಗತಿಕ ನಾಯಕರಿಂದ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಅಭಿನಂದನೆ

೩. ಇಂದಿನಿಂದ ಬಲ್ಗೇರಿಯಾ - ಫಿನ್‌ಲ್ಯಾಂಡ್‌ಗೆ ಎರಡು ದಿನಗಳ ಅಧಿಕೃತ ಭೇಟಿ ನೀಡಲಿರುವ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್

೪. ಪುರುಷರ 'ತ್ರಿಕೋನ 'ಎ ಕ್ರಿಕೆಟ್ ಸರಣಿ; ಆರಂಭಿಕ ಪಂದ್ಯದಲ್ಲಿ ಶ್ರೀಲಂಕಾ ಎ ತಂಡದ ವಿರುದ್ಧ ಭಾರತ ಎ ತಂಡಕ್ಕೆ ೮ ರನ್‌ಗಳ ಜಯ

<>><><*><><<>

ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ - ಎನ್‌ಡಿಎ ಸರ್ಕಾರವು, ೧೨ ವರ್ಷಗಳನ್ನು ಪೂರೈಸಿರುವುದನ್ನು ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು ಭಾರತದ ಅತ್ಯಂತ ದೀರ್ಘಾವಧಿಯ ಚುನಾಯಿತ ಪ್ರಧಾನಿಯಾಗಿ ಅಧಿಕಾರ ವಹಿಸಿಕೊಂಡಿರುವುದನ್ನು ಆಚರಿಸಲು ಇಂದು ನವದೆಹಲಿಯಲ್ಲಿ ಸಭೆ ನಡೆಯಲಿದೆ. ಪ್ರಧಾನಿ ಮೋದಿ ಸೇರಿದಂತೆ ಬಿಜೆಪಿಯ ಉನ್ನತ ನಾಯಕತ್ವದ ಹೊರತಾಗಿ ಮೈತ್ರಿಕೂಟದ ಎಲ್ಲಾ ಘಟಕ ಸದಸ್ಯರು ಸಭೆಯಲ್ಲಿ ಭಾಗವಹಿಸುವ ನಿರೀಕ್ಷೆಯಿದೆ. ಎನ್‌ಡಿಎ ಸಭೆಯಲ್ಲಿ ಎಲ್ಲಾ ಮೈತ್ರಿಕೂಟದ ಘಟಕಗಳ ನಾಯಕರು ಮತ್ತು ೨೨ ಎನ್‌ಡಿಎ ಆಡಳಿತದ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯಮಂತ್ರಿಗಳು ಮತ್ತು ಉಪಮುಖ್ಯಮಂತ್ರಿಗಳು ಭಾಗವಹಿಸಲಿದ್ದಾರೆ. ವಿವಿಧ ರಾಷ್ಟ್ರೀಯ ಅಭಿವೃದ್ಧಿ ಕಾರ್ಯಕ್ರಮಗಳು, ಮೂಲಸೌಕರ್ಯ ಕಾರ್ಯಕ್ರಮಗಳು ಮತ್ತು ೨೦೪೭ ರ ವೇಳೆಗೆ ರಾಷ್ಟ್ರವನ್ನು ಅಭಿವೃದ್ಧಿ ಹೊಂದಿದ ದೇಶವನ್ನಾಗಿ ಪರಿವರ್ತಿಸುವ ನರೇಂದ್ರ ಮೋದಿ ಸರ್ಕಾರದ ದೃಷ್ಟಿಕೋನವನ್ನು ಪರಿಶೀಲಿಸುವತ್ತ ಸಭೆ ಗಮನಹರಿಸಲಿದೆ.

<>><><*><><<>

ಪ್ರಧಾನಿ ನರೇಂದ್ರ ಮೋದಿಯವರು ಭಾರತದ ಅತ್ಯಂತ ದೀರ್ಘಾವಧಿಯ ಚುನಾಯಿತ ಪ್ರಧಾನಿ ಎಂಬ ಹೆಗ್ಗಳಿಕೆಗೆ ಪಾತ್ರರಾದ ಹಿನ್ನಲೆಯಲ್ಲಿ ಅವರಿಗೆ ವಿಶ್ವ ನಾಯಕರು ಅಭಿನಂದನೆ ಸಲ್ಲಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರ ಪರಿವರ್ತನಾತ್ಮಕ ಆಡಳಿತ, ಜಾಗತಿಕ ದಕ್ಷಿಣಕ್ಕಾಗಿ ಅವರ ಪ್ರತಿಪಾದನೆ ಮತ್ತು ಎಲ್ಲರನ್ನೂ ಒಳಗೊಳ್ಳುವ ಮತ್ತು ಆರ್ಥಿಕವಾಗಿ ಕ್ರಿಯಾತ್ಮಕ ಭಾರತದ ದೃಷ್ಟಿಕೋನಕ್ಕೆ ಜಗತ್ತಿನಾದ್ಯಂತದ ವಿಶ್ವ ನಾಯಕರು ಗೌರವ ಸಲ್ಲಿಸಿದ್ದಾರೆ. ಶ್ರೀಲಂಕಾದ ಅಧ್ಯಕ್ಷರಾದ ಅನುರ ಕುಮಾರ ದಿಸಾನಾಯಕ ಅವರು ಜೂನ್ ೮ ರಂದು ಪ್ರಧಾನಿಯವರನ್ನು ಉದ್ದೇಶಿಸಿ ಬರೆದ ಪತ್ರದಲ್ಲಿ, "ಈ ಮೈಲಿಗಲ್ಲು ನಿಮ್ಮ ಅಧಿಕಾರದ ವರ್ಷಗಳಿಗೆ ಮಾತ್ರವಲ್ಲ, ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವದ ಜನರು ನಿಮ್ಮ ನಾಯಕತ್ವದಲ್ಲಿ ಇಟ್ಟಿರುವ ನಂಬಿಕೆ ಮತ್ತು ವಿಶ್ವಾಸಕ್ಕೂ ಸಾಕ್ಷಿಯಾಗಿದೆ". ಪ್ರಧಾನಿ ಮೋದಿಯವರ ದೃಷ್ಟಿಕೋನವು ಶ್ರೀಲಂಕಾ ಸೇರಿದಂತೆ ಭಾರತದ ಗಡಿಗಳನ್ನು ಮೀರಿ ಅನೇಕರಿಗೆ ಸ್ಫೂರ್ತಿ ನೀಡಿದೆ ಎಂದು ಅವರು ಹೇಳಿದ್ದಾರೆ. ಪಪುವಾ ನ್ಯೂಗಿನಿಯಾದ ಪ್ರಧಾನಿ ಜೇಮ್ಸ್ ಮರಾಪೆ ಅವರು, ತಮ್ಮ ವೈಯಕ್ತಿಕ ವೀಡಿಯೊ ಸಂದೇಶದಲ್ಲಿ ಪ್ರಧಾನಿ ಮೋದಿ ಅವರನ್ನು ಮಾದರಿ ಮತ್ತು ನಾಯಕತ್ವದ ಉದಾಹರಣೆ ಎಂದು ಬಣ್ಣಿಸಿದ್ದಾರೆ. ಇಂದು ೨೦೦ ಮಿಲಿಯನ್‌ಗಿಂತಲೂ ಹೆಚ್ಚು ಜನರನ್ನು ಬಡತನದಿಂದ ಉತ್ತಮ ಜೀವನಕ್ಕೆ ತರುವಲ್ಲಿ ಅದ್ಭುತ ಸಾಧನೆ ಎಂದು ಅವರು ಬಣ್ಣಿಸಿದ್ದಾರೆ. ಪಪುವಾ ನ್ಯೂಗಿನಿಯಾದ ಆತ್ಮೀಯ ಸ್ನೇಹ ಮತ್ತು ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುವ ಬಯಕೆಯನ್ನು ಪ್ರಧಾನಿ ಮರಾಪೆ ವ್ಯಕ್ತಪಡಿಸಿದ್ದಾರೆ. ಇದಲ್ಲದೆ, ಟ್ರಿನಿಡಾಡ್ ಮತ್ತು ಟೊಬಾಗೋದ ಪ್ರಧಾನಿ ಕಮಲಾ ಪರ್ಸಾದ್-ಬಿಸ್ಸೆಸ್ಸರ್ ಅವರು ಪ್ರಧಾನಿ ಮೋದಿ ಅವರ ನಾಯಕತ್ವದಲ್ಲಿ ಭಾರತವು, ಜಾಗತಿಕ ವಿಷಯಗಳಲ್ಲಿ ಪ್ರಮುಖ ಧ್ವನಿಯಾಗಿ ವಿಕಸನಗೊಂಡಿದೆ ಎಂದು ಹೇಳಿದ್ದಾರೆ. ಅವರು ಆರಂಭದಿಂದ ೧.೪ ಶತಕೋಟಿ ಜನರ ರಾಷ್ಟ್ರವನ್ನು ಮೂರು ಅವಧಿಗಳಲ್ಲಿ ಮುನ್ನಡೆಸುವ ಪ್ರಧಾನಿ ನರೇಂದ್ರ ಮೋದಿಯವರ ಪ್ರಯಾಣವನ್ನು ಬಣ್ಣಿಸಿದ್ದಾರೆ. ವಿದೇಶಾಂಗ ನೀತಿ, ಆರ್ಥಿಕ ಬೆಳವಣಿಗೆ, ಮೂಲಸೌಕರ್ಯ ಮತ್ತು ಸಾಮಾಜಿಕ-ಆರ್ಥಿಕ ಅಭಿವೃದ್ಧಿಯಲ್ಲಿ ಭಾರತದ ಮಹತ್ವದ ಸಾಧನೆಗಳನ್ನು ಪ್ರಸ್ತಾಪಿಸಿದ್ದಾರೆ.

<>><><*><><<>

ಪಶ್ಚಿಮ ಬಂಗಾಳದಲ್ಲಿ ರಾಜ್ಯದ ಚಹಾ ತೋಟದ ಕಾರ್ಮಿಕರಿಗಾಗಿ ಪ್ರಧಾನ ಮಂತ್ರಿ ಧಾಯ್ ಶ್ರಮಿಕ್ ಯೋಜನೆಯನ್ನು ಜಾರಿಗೆ ತರಲಾಗುವುದು ಎಂದು ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯದ ಜಂಟಿ ಕಾರ್ಯದರ್ಶಿ ಅಮಿತ್ ಕುಮಾರ್ ಕೋಲ್ಕತ್ತಾದಲ್ಲಿ ಮಾಧ್ಯಮಗಳಿಗೆ ಮಾಹಿತಿ ನೀಡಿದ್ದಾರೆ.

<>><><*><><<>

ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರು ಇಂದಿನಿಂದ ಬಲ್ಗೇರಿಯಾ ಮತ್ತು ಫಿನ್‌ಲ್ಯಾಂಡ್‌ಗೆ ಎರಡು ದಿನಗಳ ಅಧಿಕೃತ ಭೇಟಿ ನೀಡಲಿದ್ದಾರೆ. ಬಲ್ಗೇರಿಯಾ ಭೇಟಿಯ ಸಮಯದಲ್ಲಿ, ಡಾ. ಜೈಶಂಕರ್ ಅವರು ಬಲ್ಗೇರಿಯಾದ ಉನ್ನತ ನಾಯಕರು ಸೇರಿದಂತೆ ಅಲ್ಲಿನ ವಿದೇಶಾಂಗ ಸಚಿವರನ್ನು ಭೇಟಿಯಾಗಿ, ಚರ್ಚೆ ನಡೆಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಫಿನ್‌ಲ್ಯಾಂಡ್ ಭೇಟಿಯ ಸಂದರ್ಭದಲ್ಲಿ, ಡಾ. ಎಸ್.ಜೈಶಂಕರ್ ಅವರು ೧೪ ನೇ ಆವೃತ್ತಿಯ 'ಕಲ್ತರಂತ' ಮಾತುಕತೆಯಲ್ಲಿ ಭಾಗವಹಿಸಲಿದ್ದಾರೆ. 'ಪರಿವರ್ತನೆಯಲ್ಲಿ ಒಂದು ಜಗತ್ತು: ಜಾಗತಿಕ, ಪ್ರಾದೇಶಿಕ ಮತ್ತು ಸ್ಥಳೀಯ ದೃಷ್ಟಿಕೋನಗಳು' ಎಂಬುದು ಈ ಆವೃತ್ತಿಯ ವಿಷಯವಾಗಿದೆ. ಇದೇ ವೇಳೆ ಅವರು ಫಿನ್‌ಲ್ಯಾಂಡ್‌ನ ಉನ್ನತ ನಾಯಕರು ಸೇರಿದಂತೆ ಅಲ್ಲಿನ ವಿದೇಶಾಂಗ ಸಚಿವರನ್ನು ಭೇಟಿಯಾಗಿ, ಮಾತುಕತೆ ನಡೆಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ಮಾಹಿತಿ ನೀಡಿದೆ.

<>><><*><><<>

ರಾಷ್ಟ್ರೀಯ ಹೆದ್ದಾರಿಗಳು ಮತ್ತು ಎಕ್ಸ್‌ಪ್ರೆಸ್‌ವೇಗಳಲ್ಲಿ ನಿರ್ವಹಣಾ ಪದ್ಧತಿಗಳನ್ನು ಬಲಪಡಿಸುವ ಗುರಿಯನ್ನು ಹೊಂದಿರುವ ತಂತ್ರಜ್ಞಾನ-ಚಾಲಿತ ಉಪಕ್ರಮಗಳ ಸರಣಿಯನ್ನು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ-ಎನ್‌ಎಚ್‌ಎಐ ಪರಿಚಯಿಸಿದೆ. ಈ ಕ್ರಮದ ಭಾಗವಾಗಿ, ನಗರ ಮತ್ತು ಅಂತರ್ನಿರ್ಮಿತ ಪ್ರದೇಶಗಳಲ್ಲಿ ಒಳಚರಂಡಿ ವ್ಯವಸ್ಥೆಗಳ ಯಾಂತ್ರಿಕೃತ ನಿರ್ವಹಣೆ ಮತ್ತು ಸ್ವಯಂಚಾಲಿತ ಗುಂಡಿ ತುಂಬುವಿಕೆ ಮತ್ತು ಯಾಂತ್ರಿಕೃತ ರಸ್ತೆ ಸ್ವಚ್ಛಗೊಳಿಸುವ ಯಂತ್ರಗಳು ಸೇರಿದಂತೆ ಸುಧಾರಿತ ಯಾಂತ್ರಿಕೃತ ರಸ್ತೆ ನಿರ್ವಹಣಾ ಉಪಕರಣಗಳ ನಿಯೋಜನೆಗಾಗಿ ಎನ್‌ಹೆಚ್‌ಎಐ ಸಮಗ್ರ ಮಾರ್ಗಸೂಚಿಗಳನ್ನು ಹೊರಡಿಸಿದೆ. ಆಧುನಿಕ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳುವುದು, ತಡೆಗಟ್ಟುವ ನಿರ್ವಹಣಾ ಪದ್ಧತಿಗಳು ಮತ್ತು ಒಪ್ಪಂದದ ಬಾಧ್ಯತೆಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವ ಮೂಲಕ ರಾಷ್ಟ್ರೀಯ ಹೆದ್ದಾರಿ ನಿರ್ವಹಣೆಯ ದಕ್ಷತೆ ಮತ್ತು ಗುಣಮಟ್ಟವನ್ನು ಸುಧಾರಿಸುವ ಗುರಿಯನ್ನು ಈ ಉಪಕ್ರಮಗಳು ಹೊಂದಿವೆ ಎಂದು ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯ ತಿಳಿಸಿದೆ. ಮುಂಬರುವ ಮಳೆಗಾಲಕ್ಕಾಗಿ ಮತ್ತು ಒಳಚರಂಡಿ ನಿರ್ವಹಣೆಯ ದಕ್ಷತೆ, ಗುಣಮಟ್ಟ ಮತ್ತು ಪರಿಣಾಮಕಾರಿತ್ವವನ್ನು ಸುಧಾರಿಸಲು, ರಾಷ್ಟ್ರೀಯ ಹೆದ್ದಾರಿಗಳು ಮತ್ತು ಎಕ್ಸ್‌ಪ್ರೆಸ್‌ವೇಗಳ ನಗರ ಮತ್ತು ಅಂತರ್ನಿರ್ಮಿತ ಪ್ರದೇಶಗಳಲ್ಲಿ ಲೈನ್ಡ್ ಡ್ರೈನ್‌ಗಳ ಯಾಂತ್ರಿಕೃತ ಶುಚಿಗೊಳಿಸುವಿಕೆಯನ್ನು ಎನ್‌ಹೆಚ್‌ಎಐ ಕಡ್ಡಾಯಗೊಳಿಸಿದೆ ಎಂದು ಹೇಳಿದೆ.

<>><><*><><<>

ಪ್ರಧಾನಮಂತ್ರಿ ನರೇಂದ್ರ ಮೋದಿ ಇದೇ ಶನಿವಾರದಿಂದ ಫ್ರಾನ್ಸ್ ಮತ್ತು ಸ್ಲೋವಾಕಿಯಾ ದೇಶಗಳಿಗೆ ಆರು ದಿನಗಳ ಅಧಿಕೃತ ಪ್ರವಾಸ ಕೈಗೊಳ್ಳಲಿದ್ದಾರೆ. ಪ್ರವಾಸದ ಮೊದಲ ಹಂತದಲ್ಲಿ ಪ್ರಧಾನಮಂತ್ರಿ ಭಾನುವಾರ ನೀಸ್ ನಗರಕ್ಕೆ ಭೇಟಿ ನೀಡಲಿದ್ದು, ಅಲ್ಲಿ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರಾನ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಈ ವರ್ಷದ ಆರಂಭದಲ್ಲಿ 'ವಿಶೇಷ ಜಾಗತಿಕ ಕಾರ್ಯತಂತ್ರದ ಪಾಲುದಾರಿಕೆ' ಮಟ್ಟಕ್ಕೆ ಏರಿಸಲಾದ ಭಾರತ-ಫ್ರಾನ್ಸ್ ದ್ವಿಪಕ್ಷೀಯ ಬಾಂಧವ್ಯದ ಸಂಪೂರ್ಣ ಆಯಾಮಗಳನ್ನು ಉಭಯ ನಾಯಕರು ಪರಾಮರ್ಶಿಸಲಿದ್ದಾರೆ. ನೀಸ್ ನಗರದಲ್ಲಿ ಉಭಯ ನಾಯಕರು ಜಂಟಿಯಾಗಿ 'ಭಾರತ್ ಇನ್ನೋವೇಟ್ಸ್' ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಈ ಕಾರ್ಯಕ್ರಮವು ಭಾರತ, ಫ್ರಾನ್ಸ್ ಮತ್ತು ಇತರ ದೇಶಗಳ ಉನ್ನತ ನಾವೀನ್ಯತೆ ಸ್ಟಾರ್ಟ್‌ಅಪ್‌ಗಳು ಹಾಗೂ ಸಾಹಸೋದ್ಯಮ ಬಂಡವಾಳ ನಿಧಿಗಳನ್ನು ಒಂದೆಡೆ ಸೇರಿಸಲಿದೆ. ಭಾರತ-ಫ್ರಾನ್ಸ್ ನಾವೀನ್ಯತೆ ವರ್ಷದ ಸಂದರ್ಭದಲ್ಲಿ ಆಯೋಜಿಸಲಾಗುತ್ತಿರುವ ಈ ಪ್ರಮುಖ ಕಾರ್ಯಕ್ರಮವು, ಉಭಯ ದೇಶಗಳ ನಡುವೆ ಇರುವ ನಾವೀನ್ಯತೆ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ.

<>><><*><><<>

ಓಮನ್ ಕರಾವಳಿಯಲ್ಲಿ ಅಮೆರಿಕ ಸೈನ್ಯದ ಅಪಾಚೆ ಹೆಲಿಕಾಪ್ಟರ್ ಅನ್ನು ಹೊಡೆದುರುಳಿಸಿದ್ದಕ್ಕೆ ಪ್ರತಿಕ್ರಿಯೆಯಾಗಿ ಅಮೆರಿಕ ಸೇನೆ ಇರಾನ್ ವಿರುದ್ಧ ದಾಳಿ ನಡೆಸಿದೆ. ಡ್ರೋನ್ ಮೂಲಕ ಇರಾನ್‌ನ ಹೆಲಿಕಾಪ್ಟರ್ ಅನ್ನು ಹೊಡೆದುರುಳಿಸಲಾಗಿದ್ದು, ಇಬ್ಬರು ಪೈಲಟ್‌ಗಳನ್ನು ರಕ್ಷಿಸಲಾಗಿದೆ ಎಂದು ಅಮೆರಿಕ ಅಧಿಕಾರಿಗಳು ತಿಳಿಸಿದ್ದಾರೆ. ಅಮೆರಿಕ ದಾಳಿಯ ನಂತರ, ಇರಾನಿನ ನಗರಗಳಾದ ಸಿರಿಕ್, ಮಿನಾಬ್, ಬಂದರ್ ಅಬ್ಬಾಸ್ ಮತ್ತು ಹಾರ್ಮುಜ್ ಜಲಸಂಧಿಯ ಗಡಿಯಲ್ಲಿರುವ ಕೆಶ್ಮ್ ದ್ವೀಪದಲ್ಲಿ ಸ್ಫೋಟಗಳು ಕೇಳಿಬಂದಿವೆ. ಇರಾನ್-ಅಮೆರಿಕ ಹೆಲಿಕಾಪ್ಟರ್ ಅನ್ನು ಹೊಡೆದುರುಳಿಸಿದ್ದಕ್ಕೆ ಅಮೆರಿಕ ಪ್ರತಿಕ್ರಿಯೆ ತುಂಬಾ ಪ್ರಬಲವಾಗಿದೆ ಎಂದು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

<>><><*><><<>

ಐರ್ಲೆಂಡ್ ಮತ್ತು ಇಂಗ್ಲೆಂಡ್ ವಿರುದ್ಧದ ಮುಂಬರುವ ಟಿ೨೦ ಅಂತಾರಾಷ್ಟ್ರೀಯ ಸರಣಿಗೆ ಭಾರತ ತಂಡದಿಂದ ವೇಗದ ಬೌಲರ್ ಮೊಹಮ್ಮದ್ ಸಿರಾಜ್ ಅವರನ್ನು ಕೈಬಿಡಲಾಗಿದೆ, ಆಯ್ಕೆ ಸಮಿತಿಯು ಪ್ರಸಿದ್ಧ್ ಕೃಷ್ಣ ಅವರನ್ನು ಅವರ ಬದಲಿಯಾಗಿ ಹೆಸರಿಸಿದೆ. ತಂಡದ ಆಡಳಿತ ಮತ್ತು ವೈದ್ಯಕೀಯ ಸಿಬ್ಬಂದಿ ನಡುವಿನ ಸಮಾಲೋಚನೆಯ ನಂತರ ಸಿರಾಜ್ ಅವರಿಗೆ ವಿಶ್ರಾಂತಿ

ತೆಗೆದುಕೊಳ್ಳುವಂತೆ ಸೂಚಿಸಲಾಗಿದೆ ಎಂದು ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ-ಬಿಸಿಸಿಐ ತಿಳಿಸಿದೆ.

<>><><*><><<>

ಶ್ರೀಲಂಕಾದ ರಂಗಿರಿ ದಂಬುಲ್ಲಾ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಪುರುಷರ ಕ್ರಿಕೆಟ್‌ನ, 'ತ್ರಿಕೋನ 'ಎ ಸರಣಿ'ಯ ಆರಂಭಿಕ ಪಂದ್ಯದಲ್ಲಿ ಭಾರತ ಎ ತಂಡವು ಶ್ರೀಲಂಕಾ ಎ ತಂಡವನ್ನು ೮ ರನ್‌ಗಳಿಂದ ಸೋಲಿಸಿತು. ಭಾರತ ಎ ತಂಡವು ಇದೆ ೧೧ ರಂದು ನಡೆಯುವ ಪಂದ್ಯದಲ್ಲಿ ಅಫ್ಘಾನಿಸ್ತಾನ್ ಎ ತಂಡವನ್ನು ಎದುರಿಸಲಿದೆ. ಎಲ್ಲಾ ಪಂದ್ಯಗಳು ದಂಬುಲ್ಲಾದಲ್ಲಿ ನಡೆಯಲಿವೆ.

<>><><*><><<>

ಸಿಡ್ನಿಯಲ್ಲಿ ನಡೆದ ಆಸ್ಟ್ರೇಲಿಯನ್ ಬ್ಯಾಡ್ಮಿಂಟನ್ ಓಪನ್‌ನಲ್ಲಿ ಭಾರತದ ಎಂ.ಆರ್. ಅರ್ಜುನ್ ಮತ್ತು ಹರಿಹರನ್ ಅಮ್ಸಕರುಣನ್ ಪುರುಷರ ಡಬಲ್ಸ್‌ನ ಎರಡನೇ ಸುತ್ತಿಗೆ ಪ್ರವೇಶಿಸಿದ್ದಾರೆ. ಭಾರತೀಯ ಜೋಡಿ ಆರಂಭಿಕ ಸುತ್ತಿನ ಪಂದ್ಯದಲ್ಲಿ ಅಮೆರಿಕದ ಜೋಡಿಯಾದ ಆರ್ಡೆನ್ ಕ್ವಾನ್ ಲೀ ಮತ್ತು ಸ್ಟಾನ್ಲಿ ಕ್ಸಿಂಗ್ ಅವರನ್ನು ೨೧-೧೩, ೨೧-೧೩ ಸೆಟ್‌ಗಳಿಂದ ಸೋಲಿಸಿತು. ಆದಾಗ್ಯೂ, ಟೂರ್ನಮೆಂಟ್‌ನಲ್ಲಿ ಭಾರತದ ಮತ್ತೊಂದು ಪುರುಷರ ಡಬಲ್ಸ್ ಜೋಡಿ - ಅಚ್ಯುತಾದಿತ್ಯ ರಾವ್ ದೊಡ್ಡವರಪು ಮತ್ತು ಅರ್ಜುನ್ ರೆಡ್ಡಿ ಪೋಚನಾ ಅವರು ಆರಂಭಿಕ ಸುತ್ತಿನಲ್ಲಿ ಸ್ಥಳೀಯ ಜೋಡಿಯಾದ ಕಾಂಕಿ ಇಗಾವಾ ಮತ್ತು ಓಯಿ ಯೆ ಹೆರ್ನ್ ವಿರುದ್ಧ ೧೫-೨೧, ೧೫-೨೧ ಸೆಟ್‌ಗಳಿಂದ ಸೋತ ನಂತರ ಆರಂಭಿಕ ಹಂತದಿಂದ ಹೊರಬಿದ್ದರು.

<>><><*><><<>

ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗವು ನಿನ್ನೆ ನವದೆಹಲಿಯಲ್ಲಿ ಡಿಜಿಟಲ್ ಬಂಧನ ಹಗರಣಗಳ ವಿರುದ್ಧ ಮಾನವ ಹಕ್ಕುಗಳನ್ನು ರಕ್ಷಿಸುವ ಕುರಿತು ಮುಕ್ತ ಸಭೆಯ ಚರ್ಚೆಯನ್ನು ಆಯೋಜಿಸಿತ್ತು. ಚರ್ಚೆಯ ಅಧ್ಯಕ್ಷತೆ ವಹಿಸಿದ್ದ ಎನ್‌ಹೆಚ್‌ಆರ್‌ಸಿ ಅಧ್ಯಕ್ಷ ನ್ಯಾಯಮೂರ್ತಿ ವಿ. ರಾಮಸುಬ್ರಮಣಿಯನ್, ಸೈಬರ್-ಶಕ್ತಗೊಂಡ ವಂಚನೆಗಳಿಂದ ಹೆಚ್ಚುತ್ತಿರುವ ಬೆದರಿಕೆಯ ಬಗ್ಗೆ ಕಳವಳ ವ್ಯಕ್ತಪಡಿಸಿದರು ಮತ್ತು ನಾಗರಿಕರ ಹಕ್ಕುಗಳು, ಘನತೆ ಮತ್ತು ಭದ್ರತೆಯ ಮೇಲೆ ಅವುಗಳ ಗಂಭೀರ ಪರಿಣಾಮವನ್ನು ಪ್ರಸ್ತಾಪಿಸಿದರು. ಕಳೆದ ಆರು ವರ್ಷಗಳಲ್ಲಿ ಭಾರತೀಯರು ಸೈಬರ್-ಶಕ್ತಗೊಂಡ ವಂಚನೆಗಳಿಂದ ೫೨ ಸಾವಿರದ ೬೦೦ ಕೋಟಿ ರೂಪಾಯಿಗಳಿಗೂ ಹೆಚ್ಚು ನಷ್ಟವನ್ನು ಅನುಭವಿಸಿದ್ದಾರೆ ಎಂದು ಅವರು ಹೇಳಿದರು, ಇದರಲ್ಲಿ ಸುಮಾರು ಎಂಟು ಪ್ರತಿಶತ ನಷ್ಟಗಳು ಡಿಜಿಟಲ್ ಬಂಧನ ಹಗರಣಗಳಿಗೆ ಸಂಬಂಧಿಸಿವೆ. ಅಂತಹ ಅಪರಾಧಗಳನ್ನು

ತಡೆಗಟ್ಟಲು, ವಂಚನೆಗೆ ಒಳಗಾದಚರಿಗೆ ವಸೂಲಾತಿ ಕಾರ್ಯವಿಧಾನಗಳನ್ನು ಸುಧಾರಿಸಲು ಮತ್ತು ಕಾನೂನು ಜಾರಿ ಪ್ರತಿಕ್ರಿಯೆಗಳನ್ನು ಬಲಪಡಿಸಲು ಪ್ರಾಯೋಗಿಕ ಕ್ರಮಗಳ ಅಗತ್ಯವನ್ನು ಅವರು ಹೇಳಿದರು.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><><ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>